# ದಿನಾಂಕ: 10/02/2022 ರ ನೋಡಲ್ ಅಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಂಖ್ಯೆ–135 ಪಾದರಾಯನಪುರ ವಾರ್ಡಿನ ವಾರ್ಡ್ ಸಮಿತಿ ಸಭೆಯ ನಡವಳಿಗಳು

| ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಮತ್ತು ಸದಸ್ಯರುಗಳ ವಿವರಗಳು: | | | ಗೈರು ಹಾಜರಿದ್ದ ಇಲಾಖೆ ಸಿಬ್ಬಂಧಿಗಳು |
|---|---|---|---|
| ಕ್ರ.ಸಂ. | ಅಧಿಕಾರಿ/ ನೌಕರರ ಹೆಸರು | ಪದನಾಮ | |
| 1 | ಶ್ರೀ. ರವಿಕುಮಾರ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ | BESCOM |
| 2 | ಶ್ರೀ. ಎಂ.ಎಸ್. ಉಮೇಶ್ | ಸಂಚಾಲಕರು ಮತ್ತು ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ–135 | SWM |
| 3 | ಶ್ರೀ. ಮುತ್ಯಾಲು | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ: 135 | BWSSB |
| 4 | ಶ್ರೀಮತಿ. ಚಂದ್ರಶೇಖರ್.ಎನ್ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ: 135 | ಕಂದಾಯ ಇಲಾಖೆ |
| 5 | ಶ್ರೀ. ಪಿ. ಮಂಜುನಾಥ | ಸ.ಕಾ.ನಿ.ಅ (ವಿದ್ಯುತ್) | |
| 6 | ಶ್ರೀಮತಿ. ಸುಧಾ.ಎಸ್ | ಕಂದಾಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ: 135 | |
| 7 | ಶ್ರೀ. ಗುಣಶೇಖರ್ | ಎ.ಎಸ್.ಐ, ಜೆಜೆಆರ್‌ನಗರ ಪೊಲೀಸ್ ಠಾಣೆ | |
| 8 | ಶ್ರೀ. ಅನಿಲ್ | ಪೊಲೀಸ್ ಕಾನ್ಸ್‌ಟೇಬಲ್, ಜೆಜೆಆರ್‌ನಗರ ಪೊಲೀಸ್ ಠಾಣೆ | |
| 9 | ಶ್ರೀ. ವೆಂಕಟೇಶ್ | ಮಾರ್ಷಲ್ | |
| 10 | ಶ್ರೀ. ಪ್ರಕಾಶ್ | ವಾರ್ಡ್ ಸದಸ್ಯರು | |
| 11 | ಶ್ರೀ. ಸಯ್ಯದ್ | ವಾರ್ಡ್ ಸದಸ್ಯರು | |
| 12 | ಶ್ರೀ. ಕೈಜರ್ ಅಲಾಮ್ | ವಾರ್ಡ್ ಸದಸ್ಯರು | |

ವಾರ್ಡ್ ಸಮಿತಿಯ ಉದ್ದೇಶ ಮತ್ತು ಸಭೆಯ ಮಹತ್ವವನ್ನು ತಿಳಿಸಿ ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು, ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಹಿಂದಿನ ಸಭೆಯ ನಡವಳಿಗಳಲ್ಲಿದ್ದ ವಿಷಯಕ್ಕೆ ತೆಗೆದುಕೊಂಡ ಕ್ರಮದ ಬಗ್ಗೆ ಓದಿ ರೆಕಾರ್ಡ್ ಮಾಡಲಾಯಿತು. ದಾಖಲಿಸಲಾದ ವಿಷಯಗಳಲ್ಲಿ ಬಾಕಿ ಉಳಿದಿರುವ ಕೆಲಸ ಕಾರ್ಯಗಳನ್ನು ಜರೂರಾಗಿ ಕ್ರಮವಹಿಸುವಂತೆ ಸಂಬಂಧಿಸಿದವರಿಗೆ ಸೂಚಿಸಲಾಯಿತು.

2. **ಇಂದಿನ ಸಭೆಯಲ್ಲಿ ಮಾನ್ಯ ಅಧ್ಯಕ್ಷರ ಸಮ್ಮುಖದಲ್ಲಿ ಚರ್ಚಿಸಿದ ವಿಷಯಗಳು:**

| ಕ್ರ ಸಂ | ವಿಷಯಗಳು | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 1 | ಹೊಸಹಳ್ಳಿ ಮುಖ್ಯರಸ್ತೆಯಲ್ಲಿ ಪಾರ್ಕಿಂಗ್ ಬಗ್ಗೆ. | ಈ ಬಗ್ಗೆ ಸಭೆಯಲ್ಲಿ ಚರ್ಚಿಸಿ ಹೊಸಹಳ್ಳಿ ಮುಖ್ಯಸ್ತೆಯಲ್ಲಿ ವಾಹನಗಳ ಪಾರ್ಕಿಂಗ್‌ನ್ನು ಸಮ ಬೆಸ ಮಾದರಿಯಲ್ಲಿ ಅಳವಡಿಸಲು ಪೊಲೀಸ್ ಸಂಚಾರಿ ಇಲಾಖೆಗೆ ಪತ್ರ ಬರೆದು ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಲು ಸೂಚಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಜೆಜೆಆರ್‌ನಗರ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್:135, ಪೊಲೀಸ್ ಸಂಚಾರಿ ವಿಭಾಗ |

ಪು.ತಿ.ನೋ

| | | | |
|---|---|---|---|
| 2 | ಅರಫತ್‌ನಗರ ಸುತ್ತಮುತ್ತಲಿನ ಪ್ರದೇಶದಲ್ಲಿ ನೀರು ಸರಬರಾಜು ವ್ಯತ್ಯಯ ಉಂಟಾಗುತ್ತಿರುವ ಬಗ್ಗೆ | ಸಭೆಯಲ್ಲಿ ಅರಫತ್‌ನಗರ ಸುತ್ತಮುತ್ತಲಿನ ಪ್ರದೇಶದಲ್ಲಿ ನೀರು ಸರಬರಾಜು ವ್ಯತ್ಯಯ ಉಂಟಾಗಿ ತೊಂದರೆಯಾಗುತ್ತಿರುವ ಬಗ್ಗೆ ದೂರು ನೀಡಿದ್ದು, ಈ ಬಗ್ಗೆ ಜಲಮಂಡಳಿ ಅಧಿಕಾರಿಗಳಿಗೆ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳವಂತೆ ತಿಳಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು, BWSSB |
| 3 | BWSSB ಮತ್ತು BESCOM ಅಧಿಕಾರಿಗಳು ಸಭೆಗೆ ಹಾಜರಾಗದಿರುವ ಬಗ್ಗೆ | ಸಭೆಯಲ್ಲಿ ನೀರು ಮತ್ತು ಒಳಚರಂಡಿ ಹಾಗೂ ವಿದ್ಯುತ್‌ಗೆ ಸಂಬಂಧಪಟ್ಟಂತೆ ಹಲವಾರು ದೂರುಗಳು ಬರುತ್ತಿದ್ದು, ದೂರುಗಳನ್ನು ಅಹವಾಲಿಸಿ ಪರಿಹರಿಸಲು ಸಂಬಂದಪಟ್ಟ BWSSB ಮತ್ತು BESCOM ಅಧಿಕಾರಿಗಳು ಸಭೆಗೆ ಹಾಜರಾಗದಿರುವ ಬಗ್ಗೆ ಅಧ್ಯಕ್ಷರು ಗಮನಿಸಿ ಸಂಬಂಧಪಟ್ಟ ಅಧಿಕಾರಿಗಳ ಹೆಸರಿಗೆ ಪತ್ರ ಬರೆಯಲು ಸಭೆಯಲ್ಲಿ ನಿರ್ದೇಶಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಜೆಜೆಆರ್‌ನಗರ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್:135 |
| 4 | ಅರಫತ್‌ನಗರ ಪ್ರದೇಶಗಳಲ್ಲಿ ಅಪರಾಧ ಚಟುವಟಿಕೆಗಳು ಹೆಚ್ಚಾಗುತ್ತಿರುವ ಬಗ್ಗೆ | ಸಭೆಯಲ್ಲಿ ಅರಫತ್‌ನಗರ ಪ್ರದೇಶಗಳಲ್ಲಿ ರಾತ್ರಿ ವೇಳೆಯಲ್ಲಿ ಹಲವಾರು ಅಪರಾಧ ಚಟುವಟಿಕೆಗಳು ಹೆಚ್ಚಾಗುತ್ತಿದ್ದು, ರಾತ್ರಿ ವೇಳೆಯಲ್ಲಿ ಸಾರ್ವಜನಿಕರು ಸಂಚರಿಸಲು ಅಸುರಕ್ಷತೆ ಎದುರಾಗಿದ್ದು, ಈ ಬಗ್ಗೆ ಅಧ್ಯಕ್ಷರು ಅಪರಾಧ ಚಟುವಟಿಕೆ ತಡೆಗಟ್ಟಲು ಸೂಕ್ತ ಕ್ರಮ ಕೈಗೊಳ್ಳಲು ಪೊಲೀಸ್ ಇಲಾಖೆಗೆ ಪತ್ರ ಬರೆಯಲು ಸೂಚಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಜೆಜೆಆರ್‌ನಗರ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್:135, ಆರಕ್ಷಕ ನಿರೀಕ್ಷಕರು, ಜೆಜೆಆರ್‌ನಗರ ಪೊಲೀಸ್ ಠಾಣೆ |
| 5 | ರಸ್ತೆ ಗುಂಡಿ ಮುಚ್ಚುವ ಬಗ್ಗೆ | ವಾರ್ಡ್ ವ್ಯಾಪ್ತಿಯಲ್ಲಿ ಮಳೆಯಿಂದ ಹಾಗೂ BWSSB ಒಳಚರಂಡಿ ದುರಸ್ಥಿ ಕಾಮಗಾರಿಗಳಿಂದ ರಸ್ತೆಗಳಲ್ಲಿ ಗುಂಡಿಗಳು ಹೆಚ್ಚಾಗಿದ್ದು, ಇದನ್ನು ಮುಚ್ಚಲು ಅಗತ್ಯ ಕ್ರಮಕೈಗೊಳ್ಳವಂತೆ ಸೂಚಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಜೆಜೆಆರ್‌ನಗರ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್:135 |

ಮೇಲ್ಕಂಡ ಎಲ್ಲಾ ವಿಷಯಗಳೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ವಂದನಾರ್ಪಣೆಗಳೊಂದಿಗೆ ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು
ಸಹಾಯಕ ಅಭಿಯಂತರರು

ಅಧ್ಯಕ್ಷರು &
ನೋಡಲ್ ಅಧಿಕಾರಿ

ಪ್ರತಿಯನ್ನು:–

1. ಮಾನ್ಯ ಆಡಳಿತಾಧಿಕಾರಿ, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಮುಖ್ಯ ಅಭಿಯಂತರರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
5. ನೋಡಲ್ ಅಧಿಕಾರಿ, ವಾರ್ಡ್ ಸಂಖ್ಯೆ: 135 ಪಾದರಾಯನಪುರ ರವರ ಅವಗಾಹನೆಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಚಾಮರಾಜಪೇಟೆ ವಿಭಾಗ ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ಪಶ್ಚಿಮ ವಿಭಾಗ, ಬಿಬಿಎಂಪಿ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಆರೋಗ್ಯ ವೈದ್ಯಾಧಿಕಾರಿ, ಚಾಮರಾಜಪೇಟೆ ವಲಯ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಜೆಜೆಆರ್ ನಗರ ಉಪವಿಭಾಗ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
10. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BWSSB) ಪಾದರಾಯನಪುರ ವಲಯ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BESCOM) ಪಾದರಾಯನಪುರ ವಲಯ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
12. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬೃಹತ್ ರಾಜಕಾಲುವೆ (SWD) ಪಶ್ಚಿಮ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
13. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ಚಾಮರಾಜಪೇಟೆ ವಿಭಾಗ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹ ಕಂದಾಯ ಅಧಿಕಾರಿ, ಚಾಮರಾಜಪೇಟೆ ಉಪವಿಭಾಗ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
15. ಪೊಲೀಸ್ ಇನ್ಸ್‌ಪೆಕ್ಟರ್, ಕಾನೂನು ಮತ್ತು ಸುವ್ಯವಸ್ಥೆ, ಚಾಮರಾಜಪೇಟೆ/ವಿ.ವಿ.ಪುರಂ/ಸೆಂಟ್ರಲ್ ಪೊಲೀಸ್ ಠಾಣೆ, ಬೆಂಗಳೂರು ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
16. ಆರಕ್ಷಕ ನಿರೀಕ್ಷಕರು, ಜೆ.ಜೆ.ಆರ್. ನಗರ/ ಚಾಮರಾಜಪೇಟೆ ಸಂಚಾರಿ ವಿಭಾಗ, ಬೆಂಗಳೂರು ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
17. ವಾರ್ಡ್ ಸಂಖ್ಯೆ: 135 ಪಾದರಾಯನಪುರ ವಾರ್ಡ್ ಕಮಿಟಿ ಸದಸ್ಯರ ಮಾಹಿತಿಗಾಗಿ ಸಲ್ಲಿಸಿದೆ.